Akashvani: Bangalore
National Bulletin In Kannada
10.10.2026: 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
10.10.2026: 7.35AM
**********

**ಮುಖ್ಯಾಂಶಗಳು:**

1. ಹದಿಹರೆಯದ ಹೆಣ್ಣುಮಕ್ಕಳ ಸರ್ವಾಂಗೀಣ ವಿಕಸನದತ್ತ ಹೆಚ್ಚಿನ ಗಮನಹರಿಸುವಂತೆ ಪ್ರಧಾನಿ ನರೇಂದ್ರ ಮೋದಿ ಕರೆ
2. ರಕ್ಷಣಾ ವಲಯದಲ್ಲಿನ ಸ್ವಾವಲಂಬನೆಯೇ ಇಂದಿನ ರಾಷ್ಟ್ರೀಯ ಭದ್ರತೆ - ಸಚಿವ ರಾಜನಾಥ್ ಸಿಂಗ್
3. ಇಥಿಯೋಪಿಯಾ ಪ್ರಧಾನಿ ಅಬಿಯ್ ಅಹಮದ್ ಅವರೊಂದಿಗೆ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಮಾತುಕತೆ; ದ್ವಿಪಕ್ಷೀಯ ಬಾಂಧವ್ಯ ಬಲವರ್ಧನೆ
4. ಉತ್ತರ ಪ್ರದೇಶದಿಂದ ಬಿಜೆಪಿಯ ಲ, ಸಮಾಜವಾದಿ ಪಕ್ಷದ ಇಬ್ಬರು, ಸೇರಿ ಒಟ್ಟು ಹತ್ತು ಅಭ್ಯರ್ಥಿಗಳು ರಾಜ್ಯಸಭೆಗೆ ಅವಿರೋಧ ಆಯ್ಕೆ
5. ವಿಶ್ವ ಬೌಲ್ಸ್ ಚಾಂಪಿಯನ್ ಆಫ್ ಚಾಂಪಿಯನ್ಸ್ ಟೂರ್ನಿ; ಭಾರತದ ಪುತುಲ್ ಸೋನೋವಾಲ್ ಅವರಿಂದ ಮೊಟ್ಟಮೊದಲ ಪದಕ ಖಚಿತ.

***********

ಹದಿಹರೆಯದ ಹೆಣ್ಣು ಮಕ್ಕಳ ಆರೋಗ್ಯ, ಪೋಷಣೆ ಮತ್ತು ಸರ್ವಾಂಗೀಣ ವಿಕಸನದತ್ತ ಹೆಚ್ಚಿನ ಗಮನಹರಿಸುವಂತೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕುರಿತ ಎರಡು ದಿನಗಳ ರಾಷ್ಟ್ರೀಯ ಇಲಾಖಾ ಶೃಂಗಸಭೆಯ ಸಮಾರೋಪ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ಅಂಗನವಾಡಿ ಕೇಂದ್ರಗಳನ್ನು ಸಮುದಾಯ ಸಹಭಾಗಿತ್ವದ ಕೇಂದ್ರಗಳಾಗಿ ಅಭಿವೃದ್ಧಿಪಡಿಸಬೇಕು ಹಾಗೂ ಸ್ಥಳೀಯ ಕುಟುಂಬಗಳು, ಪೌಷ್ಠಿಕ ಆಹಾರ, ಆಟಿಕೆಗಳನ್ನು ಹಂಚಿಕೊಳ್ಳುವಂತೆ ಪ್ರೋತ್ಸಾಹಿಸಬೇಕು ಎಂದರು. ಮಹಿಳೆಯರ ಸುರಕ್ಷತೆ ಮತ್ತು ಸಬಲೀಕರಣಕ್ಕಾಗಿ ಮಕ್ಕಳಿಗೆ ಸೂಕ್ತವಾದ ಜಾಗೃತಿ ಪಠ್ಯಕ್ರಮಗಳನ್ನು ರೂಪಿಸಲು ಪ್ರಧಾನಿ ಸಲಹೆ ನೀಡಿದರು. ಸ್ಥಳೀಯ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಜಿಲ್ಲಾ, ನಗರಸಭೆ ಹಾಗೂ ಮಹಾನಗರ ಪಾಲಿಕೆ ಮಟ್ಟದಲ್ಲಿ ಚಿಂತನ ಶಿಬಿರ

ಆಯೋಜಿಸುವಂತೆ ರಾಜ್ಯಗಳಿಗೆ ಸೂಚಿಸಿದರು. ಉತ್ತಮ ಆರೋಗ್ಯ ಮತ್ತು ಪೋಷಣೆ ನೈರ್ಮಲ್ಯದಿಂದಲೇ ಆರಂಭವಾಗುತ್ತದೆ. ಆದ್ದರಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸ್ವಚ್ಛತಾ ಅಭಿಯಾನದ ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದರು.

***********

ಪ್ರಸ್ತುತ ಯುಗದಲ್ಲಿ ರಾಷ್ಟ್ರೀಯ ಭದ್ರತೆಯ ಪರಿಕಲ್ಪನೆ ಸಂಪೂರ್ಣವಾಗಿ ಬದಲಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ. ಕೇವಲ ಸಶಸ್ತ್ರ ಪಡೆಗಳ ಬಲದಿಂದ ಮಾತ್ರವಲ್ಲದೇ, ರಕ್ಷಣಾ ವಲಯದಲ್ಲಿನ ಸ್ವಾವಲಂಬನೆಯಿಂದಲೂ ರಾಷ್ಟ್ರೀಯ ಭದ್ರತೆ ನಿರ್ಧಾರವಾಗುತ್ತದೆ ಎಂದು ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿ ನಡೆದ ಭಾರತೀಯ ರಕ್ಷಣಾ ಉತ್ಪಾದಕರ ಸಂಘದ ಚಾಂಪಿಯನ್ಸ್ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಭಾರತ ಅತ್ಯಾಧುನಿಕ ಮಿಲಿಟರಿ ಬಿಡಿ ಭಾಗಗಳ ವಿಶ್ವಾಸಾರ್ಹ ರಫ್ತುದಾರನಾಗಿ ಹೊರ ಹೊಮ್ಮುತ್ತಿದೆ ಎಂದರು. ೨೦೨೪-೨೫ನೇ ಹಣಕಾಸು ವರ್ಷದಲ್ಲಿ ಭಾರತದ ರಕ್ಷಣಾ ರಫ್ತು ದಾಖಲೆಯ ೩೮ ಸಾವಿರದ ೪೨೪ ಕೋಟಿ ರೂಪಾಯಿಗೆ ತಲುಪಿದ್ದು, ಹಿಂದಿನ ಹಣಕಾಸು ವರ್ಷಕ್ಕೆ ಹೋಲಿಸಿದರೆ ಶೇಕಡ ೬೦ಕ್ಕಿಂತ ಅಧಿಕ ಬೆಳವಣಿಗೆ ದಾಖಲಿಸಿದೆ ಎಂದು ಸಚಿವರು ಮಾಹಿತಿ ನೀಡಿದರು.

***********

ಇಥಿಯೋಪಿಯಾ ಪ್ರವಾಸದಲ್ಲಿರುವ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಅಡೀಸ್ ಅಬಾಬಾದಲ್ಲಿ ನಿನ್ನೆ ಇಥಿಯೋಪಿಯಾ ಪ್ರಧಾನಿ ಅಬಿಯ್ ಅಹಮದ್ ಅಲಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರ ವೈಯಕ್ತಿಕ ಶುಭ ಹಾರೈಕೆಗಳನ್ನು ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ಹಂಚಿಕೆಯ ಅಭಿವೃದ್ಧಿಯ ಆಕಾಂಕ್ಷೆಗಳು ಮತ್ತು ದಕ್ಷಿಣ - ದಕ್ಷಿಣ ಒಗ್ಗಟ್ಟನ್ನು ಪ್ರತಿಬಿಂಬಿಸುವ ರೀತಿಯಲ್ಲಿ ಇತ್ತೀಚಿನ ವರ್ಷಗಳಲ್ಲಿ ಭಾರತ - ಇಥಿಯೋಪಿಯಾ ದ್ವಿಪಕ್ಷೀಯ ಸಹಕಾರ ಗಣನೀಯವಾಗಿ ವೇಗ ಪಡೆದುಕೊಂಡಿದೆ ಎಂದಿದ್ದಾರೆ. ಸಮಾರಂಭವೊಂದನ್ನುದ್ದೇಶಿಸಿ ಮಾತನಾಡಿರುವ ಸಚಿವ ಎಸ್. ಜೈಶಂಕರ್, ಜಾಗತಿಕ ಬಿಕ್ಕಟ್ಟುಗಳು ಅಭಿವೃದ್ಧಿಶೀಲ ರಾಷ್ಟ್ರಗಳ ಮೇಲೆ ಬೀರುತ್ತಿರುವ ಪರಿಣಾಮವನ್ನು ಅಂತಾರಾಷ್ಟ್ರೀಯ ಸಮುದಾಯ ಕಡೆಗಣಿಸಲು ಸಾಧ್ಯವಿಲ್ಲದ ಕಾರಣ ಜಾಗತಿಕ ದಕ್ಷಿಣದ ಧ್ವನಿಯನ್ನು ಬಲವಾಗಿ

ಪ್ರತಿಪಾದಿಸಲು ಭಾರತ ಮತ್ತು ಆಫ್ರಿಕಾದ ರಾಷ್ಟ್ರಗಳು ಒಟ್ಟಾಗಿ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

***********

ನವದೆಹಲಿಯ ಜಂತರ್ ಮಂತರ್‌ನಲ್ಲಿ ಸಿಜೆಪಿ ಇಂದು ನಡೆಸಲು ಉದ್ದೇಶಿಸಿದ್ದ ಪ್ರತಿಭಟನೆಗೆ ದೆಹಲಿ ಪೊಲೀಸರು ಅನುಮತಿ ನಿರಾಕರಿಸಿದ್ದಾರೆ. ಈ ಕುರಿತು ಸುದ್ದಿಗೋಷ್ಠಿಯಲ್ಲಿ ನಿನ್ನೆ ಮಾಹಿತಿ ನೀಡಿದ ದೆಹಲಿ ಜಂಟಿ ಪೊಲೀಸ್ ಆಯುಕ್ತರಾದ ನೂಪುರ್ ಪ್ರಸಾದ್, ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ಅಥವಾ ಇತರ ಕಾರ್ಯಕ್ರಮಗಳನ್ನು ನಡೆಸಲು ಕನಿಷ್ಠ ೧೦ ದಿನ ಮುಂಚಿತವಾಗಿ ಅರ್ಜಿ ಸಲ್ಲಿಸುವುದು ಕಡ್ಡಾಯವಾಗಿದೆ ಎಂದು ತಿಳಿಸಿದರು. ಪ್ರಸ್ತುತ ಕಾನೂನು ಮತ್ತು ಸುವ್ಯವಸ್ಥೆ ಪರಿಸ್ಥಿತಿ, ಸಾರ್ವಜನಿಕ ಸುರಕ್ಷತೆ ಹಾಗೂ ನವದೆಹಲಿ ಭಾಗದ ಸಂಚಾರ ನಿಯಂತ್ರಣವನ್ನು ಗಮನದಲ್ಲಿಟ್ಟುಕೊಂಡು ಈ ಅನುಮತಿಯನ್ನು ನಿರಾಕರಿಸಲಾಗಿದೆ ಎಂದು ಜಂಟಿ ಕಮಿಷನರ್ ಸ್ಪಷ್ಟಪಡಿಸಿದ್ದಾರೆ. ಸಂಬಂಧಿತ ಪ್ರದೇಶದಾದ್ಯಂತ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆಯ ಸಕ್ಷನ್-೧೬೩ಅನ್ನು ಜಾರಿಗೊಳಿಸಿ, ಕಾನೂನು ಸುವ್ಯವಸ್ಥೆ ಮತ್ತು ಸಾರ್ವಜನಿಕ ಸುರಕ್ಷತೆಗಾಗಿ ಅಗತ್ಯ ನಿರ್ಬಂಧಗಳನ್ನು ಹೇರಲಾಗಿದೆ. ಭದ್ರತಾ ಕಾರಣಗಳಿಂದಾಗಿ ದೆಹಲಿ ಮೆಟ್ರೊ, ಆಜ ಮೆಟ್ರೋ ನಿಲ್ದಾಣಗಳಲ್ಲಿ ಸಂಜೆ ಆರು ಗಂಟೆಯವರೆಗೆ ಪ್ರವೇಶ, ನಿರ್ಗಮನದ ಸೌಲಭ್ಯಗಳು ಲಭ್ಯವಿರುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

***********

ಪಶ್ಚಿಮಬಂಗಾಳ, ಅಸ್ಸಾಂ, ತಮಿಳುನಾಡು ಮತ್ತು ಪುದುಚೆರಿಯ ಐದು ವಿಧಾನಸಭಾ ಹಾಗೂ ಒಂದು ಲೋಕಸಭಾ ಕ್ಷೇತ್ರಗಳು ಸೇರಿದಂತೆ ಒಟ್ಟು ಆರು ಕ್ಷೇತ್ರಗಳಿಗೆ ನಡೆದ ಉಪಚುನಾವಣೆಯ ಫಲಿತಾಂಶ ಪ್ರಕಟಗೊಂಡಿದ್ದು, ಆಡಳಿತಾರೂಢ ಬಿಜೆಪಿ ಹಾಗೂ ಪ್ರಾದೇಶಿಕ ಪಕ್ಷಗಳು ಗೆಲುವು ಸಾಧಿಸಿವೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿ, ನಂದಿಗ್ರಾಮ ಮತ್ತು ರೆಜಿ ಗ್ರಾಮ ಎರಡೂ ವಿಧಾನಸಭಾ ಕ್ಷೇತ್ರಗಳಲ್ಲಿ ಭಾರೀ ಅಂತರದ ಗೆಲುವು ದಾಖಲಿಸಿದೆ. ಅಸ್ಸಾಂನ ನಗಾಂವ್ ಲೋಕಸಭಾ ಉಪಚುನಾವಣೆಯಲ್ಲಿ ಬಿಜೆಪಿಯ ದೇವ್‌ಶಿಶ್ ಶರ್ಮಾ ಗೆಲುವು ದಾಖಲಿಸಿದ್ದಾರೆ. ತಮಿಳುನಾಡಿನಲ್ಲಿ ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ನೇತೃತ್ವದ ತಮಿಳಗ ವೆಟ್ರಿ ಕಳಗಂ - ಟಿವಿಕೆ ಪಕ್ಷ ಧಾರಾಪುರಂ ಮತ್ತು ಮಧುರಾಂತಕಂ ಎರಡೂ ವಿಧಾನಸಭಾ ಕ್ಷೇತ್ರಗಳಲ್ಲಿ ಗೆದ್ದಿದೆ. ಇನ್ನು ಪುದುಚೆರಿಯಲ್ಲಿ ಎನ್‌ಡಿಎ ಮೈತ್ರಿಕೂಟದ ಭಾಗವಾಗಿರುವ ಅಖಿಲ ಭಾರತ ಎನ್‌ಆರ್ ಕಾಂಗ್ರೆಸ್, ಪಕ್ಷ ತಟ್ಟಂಚಾವಡಿ ವಿಧಾನಸಭಾ ಕ್ಷೇತ್ರದಲ್ಲಿ ಗೆಲುವು ದಾಖಲಿಸಿ, ತನ್ನ ಸ್ಥಳವನ್ನು

ಉಳಿಸಿಕೊಂಡಿದೆ. ಅಸ್ಸಾಂನ ನಗಾಂವ್ ಲೋಕಸಭಾ ಕ್ಷೇತ್ರ ಹಾಗೂ ಪಶ್ಚಿಮ ಬಂಗಾಳದ ನಂದಿಗ್ರಾಮ ಮತ್ತು ರೆಜಿನಗರ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗಳ ಫಲಿತಾಂಶ, ಬಿಜೆಪಿ ಹಾಗೂ ಎನ್‌ಡಿಎ ಮೈತ್ರಿಕೂಟದ ಸುಶಾಸನದ ಮೇಲಿನ ಜನರಿಗಿರುವ ಆಳವಾದ ಬಾಂಧವ್ಯಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

***********

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಹಾಗೂ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ ಕೂಡಿರುವ ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ '೨೦೨೫ರ ವಕ್ಫ್ ಸುಧಾರಣೆಗಳ ಕುರಿತ ಒಂದು ವರದಿ ಇಲ್ಲಿದೆ. ಈ ಹಿಂದೆ ವಕ್ಫ್ ಕಾಯ್ದೆಯ ಸಕ್ಷನ್ ೪೦ರಡಿ ವಕ್ಫ್ ಮಂಡಳಿಗೆ ಯಾವುದೇ ಆಸ್ತಿಯನ್ನು ಸ್ವಯಂ ನಿರ್ಧಾರದ ಮೂಲಕ ವಕ್ಫ್ ಆಸ್ತಿ ಎಂದು ಘೋಷಿಸುವ ಅಧಿಕಾರವಿತ್ತು. ಇದರಿಂದಾಗಿ ನೋಂದಾಯಿತ ವಕ್ಫ್ ಆಸ್ತಿಗಳ ಸಂಖ್ಯೆಯಲ್ಲಿ ಭಾರೀ ಹೆಚ್ಚಳ ಕಂಡುಬಂದಿತ್ತು. ೨೦೧೩ರಲ್ಲಿ ೨.೦೭ ಲಕ್ಷ ಇದ್ದ ಈ ಆಸ್ತಿಗಳ ಸಂಖ್ಯೆ ೮.೭೨ ಲಕ್ಷಕ್ಕೆ ತಲುಪಿದೆ. ಈ ಪೈಕಿ ಸರ್ಕಾರಿ ಸ್ವಾಮ್ಯದ ೫ ಸಾವಿರದ ೯೭೩ ಆಸ್ತಿಗಳೂ ಸೇರಿರುವುದು ಗಂಭೀರ ಚಿಂತನೆಗೆ ಕಾರಣವಾಗಿತ್ತು. ಈ ಲೋಪದೋಷಗಳನ್ನು ಸರಿಪಡಿಸಲು ಜಾರಿಗೆ ತರಲಾಗಿರುವ ವಕ್ಫ್ ತಿದ್ದುಪಡಿ ಕಾಯ್ದೆ ೨೦೨೫ಅನ್ನು ಉಮೀದ್ ಕಾಯ್ದೆ ಎಂದು ಕರೆಯಲಾಗುತ್ತದೆ. ಈ ಹೊಸ ಕಾಯ್ದೆ, ವಕ್ಫ್ ಮಂಡಳಿಯ ಏಕಪಕ್ಷೀಯ ಅಧಿಕಾರ ನೀಡುತ್ತಿದ್ದ, ನಿಬಂಧನೆಯನ್ನು ಸಂಪೂರ್ಣವಾಗಿ ತೆಗೆದುಹಾಕಿದೆ. ಇನ್ನು ಮುಂದೆ ಸರ್ಕಾರಿ ಭೂಮಿಯ ಮೇಲಿನ ಯಾವುದೇ ಹಕ್ಕುಗಳ ಪ್ರತಿಪಾದನೆಯನ್ನು ಕಲೆಕ್ಟರ್‌ಗಿಂತ ಹೆಚ್ಚಿನ ಶ್ರೇಣಿಯ ಅಧಿಕಾರಿಯೊಬ್ಬರು ಕೂಲಂಕುಶವಾಗಿ ಪರಿಶೀಲಿಸಬೇಕಾಗುತ್ತದೆ. ಜೊತೆಗೆ ವಕ್ಫ್ ನಿರ್ಧಾರಗಳ ವಿರುದ್ಧ ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲು ಇದೇ ಮೊದಲ ಭಾರಿ ನೇರ ಅವಕಾಶ ಕಲ್ಪಿಸಲಾಗಿದೆ. ಈ ಕಾನೂನಾತ್ಮಕ ಸುಧಾರಣೆಗಳ ಜೊತೆಗೆ ಸಮಗ್ರ ಡಿಜಿಟಲೀಕರಣ ಪ್ರಕ್ರಿಯೆಗಳು ಜೊತೆ ಜೊತೆಗೆ ನಡೆಯುತ್ತಿವೆ.

***********

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ಜಾರ್ಖಂಡ್‌ನ ದೇವಘರ್‌ಗೆ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಅವರು ದೇವಘರ್‌ನ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಎರಡನೇ ಘಟಿಕೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ಬಳಿಕ, ದೇವಘರ್‌ನ ಬಿಬಿಎಂಟಿ ಆಸ್ಪತ್ರೆಯಲ್ಲಿ ಆಯೋಜಿಸಲಾಗಿರುವ ಸೈನ್ಯ ಸಂಪರ್ಕ ಮೇಳಕ್ಕೂ ಉಪರಾಷ್ಟ್ರಪತಿಗಳು ಭೇಟಿ ನೀಡಲಿದ್ದಾರೆ.

***********

ಉತ್ತರ ಪ್ರದೇಶದಿಂದ ರಾಜ್ಯಸಭೆಗೆ ಭಾರತೀಯ ಜನತಾ ಪಕ್ಷದ ೮ ಹಾಗೂ ಸಮಾಜವಾದಿ ಪಕ್ಷದ ಇಬ್ಬರು ಅಭ್ಯರ್ಥಿಗಳು ಸೇರಿದಂತೆ ಒಟ್ಟು ಎಲ್ಲಾ ಹತ್ತು ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ಕುರಿತು ಉತ್ತರ ಪ್ರದೇಶ ವಿಧಾನಸಭಾ ವಿಶೇಷ ಕಾರ್ಯದರ್ಶಿ ಹಾಗೂ ಚುನಾವಣಾಧಿಕಾರಿ ಅಜಿತ್ ವರ್ಮಾ ದೃಢಪಡಿಸಿದ್ದಾರೆ. ಬಿಜೆಪಿಯಿಂದ ಧರಂಪಾಲ್ ಸಿಂಗ್, ಪ್ರಕಾಶ್ ಪಾಲ್, ಶೃತಿ ಗಂಗ್ವಾರ್, ವಿದ್ಯಾಸಾಗರ್ ಸೋಂಕರ್, ಪ್ರಿಯಾಂಕ ರಾವತ್, ರಾಧಾಕಾಂತ್ ಓಜಾ, ಗೋಪಿಕೃಷ್ಣ ಮಾಂಡೆ ಮತ್ತು ರಾಮ್‌ಪ್ರತಾಪ್ ಸಿಂಗ್ ಚವ್ಹಾಣ್, ರಾಜ್ಯಸಭೆ ಪ್ರವೇಶಿಸಿದ್ದರೆ, ಸಮಾಜವಾದಿ ಪಕ್ಷದಿಂದ ರಾಮ್‌ಗೋಪಾಲ್ ಯಾದವ್ ಹಾಗೂ ಧನ್‌ರಾಜ್ ಪರಿಮಲ್ ನಥ್ವಾನಿ ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾದ ಅಭ್ಯರ್ಥಿಗಳಾಗಿದ್ದಾರೆ.

***********

ಆಸ್ಟ್ರೇಲಿಯಾದ ಬಾರ್ಹರ್ಮ್‌ನಲ್ಲಿ ನಡೆಯುತ್ತಿರುವ ವಿಶ್ವ ಬೌಲ್ಸ್ ಚಾಂಪಿಯನ್ ಆಫ್ ಚಾಂಪಿಯನ್ಸ್ ಟೂರ್ನಿಯಲ್ಲಿ ಭಾರತದ ಪುತುಲ್ ಸೋನೋವಾಲ್ ಐತಿಹಾಸಿಕ ಸಾಧನೆ ಮಾಡಿದ್ದಾರೆ. ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಸೆಮಿಫೈನಲ್ ಪ್ರವೇಶಿಸುವ ಮೂಲಕ ಭಾರತಕ್ಕೆ ಈ ಟೂರ್ನಿಯಲ್ಲಿ ಮೊಟ್ಟಮೊದಲ ಪದಕವನ್ನು ಖಚಿತಪಡಿಸಿದ್ದಾರೆ. ಅಸ್ಸಾಂ ಮೂಲದ ೪೩ ವರ್ಷದ ಸೋನೋವಾಲ್, ಕ್ವಾರ್ಟರ್ ಫೈನಲ್‌ನಲ್ಲಿ ಸಿಂಗಾಪುರದ ಹರಿಮನ್ ಯುಯೆನ್ ಅವರನ್ನು ಸೋಲಿಸಿ ಅಂತಿಮ ನಾಲ್ಕರ ಹಂತಕ್ಕೆ ತಲುಪಿದರು. ೨೦೨೪ರ ಏಷ್ಯನ್ ಲಾನ್ ಬೌಲ್ಸ್ ಚಾಂಪಿಯನ್‌ಷಿಪ್‌ನ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಸೋನೋವಾಲ್ ಚಿನ್ನದ ಪದಕ ಗೆದ್ದಿದ್ದರು.

***********